I/552681/2024

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೆಂಗಳೂರು ನಗರ ಜಿಲ್ಲೆಯ ಯಲಹಂಕ ತಾಲ್ಲೂಕು ವ್ಯಾಪ್ತಿಯ ದೊಡ್ಡಜಾಲ ಗ್ರಾಮ ಪಂಚಾಯತಿಯ ಗ್ರಂಥಾಲಯ ಕಟ್ಟಡ ನಿರ್ಮಾಣಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾದ:** ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್ ರವರ ಪತ್ರ ಸಂಖ್ಯೆ: ಕೆಆರ್‌ಐಡಿಎಲ್/ವ್ಯ.ನಿ/ಸಾಮಾನ್ಯ/2023-24, ದಿನಾಂಕ: 08.01.2024

**ಪ್ರಸ್ತಾವನೆ:**

ಗ್ರಾಮೀಣ ಶಾಲಾ ಮಕ್ಕಳನ್ನು ಓದುವುದರಲ್ಲಿ ಮತ್ತು ಕಲಿಕೆಯಲ್ಲಿ ತೊಡಗಿಸಿಕೊಳ್ಳಲು ವ್ಯವಸ್ಥಿತವಾಗಿ ಕಲಿಕಾ ಕ್ಷೇತ್ರಕ್ಕೆ ಮರಳಿ ತರುವ ಗುರಿಯನ್ನು ಹೊಂದಿದ್ದು, ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಉನ್ನತೀಕರಿಸುವ ಹಾಗೂ ಡಿಜಿಟಲ್ ಗ್ರಂಥಾಲಯಗಳನ್ನಾಗಿ ಮೇಲ್ದರ್ಜೆಗೇರಿಸುವ ಮೂಲಕ ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ, ಯುವಕ, ಯುವತಿಯರಿಗೆ, ರೈತರಿಗೆ, ಮಹಿಳೆಯರಿಗೆ ಮತ್ತು ಮಕ್ಕಳಿಗೆ ಮಾಹಿತಿ ಸಂವಹನ ಸೇವೆಯನ್ನು ಒದಗಿಸುವ ಮೂಲಕ ಅವರುಗಳಿಗೆ ಅಭಿವೃದ್ಧಿ ಹೊಂದಿದ ನಗರ ಪ್ರದೇಶದ ನಿವಾಸಿಗಳಿಗೆ ದೊರೆಯುತ್ತಿರುವ ಉತ್ತಮ ಶೈಕ್ಷಣಿಕ ಮಾಹಿತಿಗೆ ಸರಿ ಸಮಾನವಾದ ಸೌಲಭ್ಯಗಳನ್ನು ಗ್ರಾಮೀಣ ಪ್ರದೇಶಗಳಲ್ಲಿಯೂ ಒದಗಿಸುವುದು ಮುಖ್ಯವಾಗಿರುತ್ತದೆ ಹಾಗೂ ಅವರ ಶೈಕ್ಷಣಿಕ ಮತ್ತು ಬೌದ್ಧಿಕ ಮಟ್ಟವನ್ನು ವೃದ್ಧಿಸುವ ಗ್ರಂಥಾಲಯಗಳ ಸ್ಥಾಪನೆ ಹಾಗೂ ಉನ್ನತೀಕರಣದ ಅಗತ್ಯವಿರುವುದರಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಗ್ರಾಮ ಪಂಚಾಯಿತಿಗಳಲ್ಲಿ ಗ್ರಂಥಾಲಯಗಳನ್ನು ಅರಿವು ಕೇಂದ್ರಗಳನ್ನಾಗಿ ಅಭಿವೃದ್ಧಿಪಡಿಸಲು ಮುಂದಾಗಿರುತ್ತದೆ.

2023-24 ನೇ ಸಾಲಿನ ಆಯವ್ಯಯ ಘೋಷಣೆಯಂತೆ, ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗು ಮಾಹಿತಿ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಿ "ಅರಿವು ಕೇಂದ್ರಗಳು" ಎಂದು ಮರು ಪದನಾಮೀಕರಿಸಿ ಆದೇಶಿಸಿದೆ. ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು "ಅರಿವು ಕೇಂದ್ರಗಳು" ಎಂದು ಮೇಲ್ದರ್ಜೆಗೇರಿಸುವ ಮೂಲಕ ಡಿಜಿಟಲ್ ಕಲಿಕಾ ಸಾಮಗ್ರಿಗಳು, ವೃತ್ತಿಪರ ಮಾರ್ಗದರ್ಶನ ವ್ಯವಸ್ಥೆ, ಸಂವಿಧಾನದ ಶೈಕ್ಷಣಿಕ ವ್ಯವಸ್ಥೆ, ವಿಶೇಷ ಚೇತನ ಸ್ನೇಹಿ ತಾಂತ್ರಿಕತೆ ಹಾಗು ನುರಿತ ವ್ಯಕ್ತಿಗಳಿಂದ ಜ್ಞಾನಾರ್ಜನೆ ಮುಂತಾದ ಸೌಲಭ್ಯಗಳನ್ನು ನೀಡಲಾಗುವುದು, ಜೊತೆಗೆ ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ವಾರಾಂತ್ಯದಲ್ಲಿಯೂ ತೆರೆಯಲಾಗುವುದು ಎಂದು ಘೋಷಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಗ್ರಂಥಾಲಯಗಳ ಪಾತ್ರ ಬಹು ಮುಖ್ಯವಾಗಿದ್ದು, ಗ್ರಾಮ ಪಂಚಾಯತಿ ಗ್ರಂಥಾಲಯ ನಿರ್ಮಾಣ ಮಾಡಲು ಸ್ಥಳಾವಕಾಶ/ನಿವೇಶನ ಲಭ್ಯವಿರುವ ಮತ್ತು ಹಳೇ ಕಟ್ಟಡ ತೆರವುಗೊಳಿಸಿ ಹೊಸ ಕಟ್ಟಡ ನಿರ್ಮಾಣ ಮಾಡಲು ಅವಕಾಶವಿರುವ ಹಾಗೂ ರಾಜ್ಯದ ಒಟ್ಟು 2369 ಗ್ರಾಮ ಪಂಚಾಯತಿಗಳ ಪಟ್ಟಿಯನ್ನು ಸಿದ್ಧಪಡಿಸಲಾಗಿದ್ದು, ಪ್ರಾರಂಭಿಕ ವಾಗಿ ಬೆಂಗಳೂರು ನಗರ ಜಿಲ್ಲೆಯ ದೊಡ್ಡಜಾಲ ಗ್ರಾಮ ಪಂಚಾಯಿತಿಯ ಅರಿವು ಕೇಂದ್ರ ಸೇರಿ ಗ್ರಾಮ ಪಂಚಾಯತಿ ಗ್ರಂಥಾಲಯ ನಿರ್ಮಾಣದ ಕಾಮಗಾರಿಯನ್ನು ಕೆಆರ್‌ಐಡಿಎಲ್ ಸಂಸ್ಥೆಯ CSR Fund ರಡಿ ಅನುಷ್ಠಾನಗೊಳಿಸುವಂತೆ ಮಾನ್ಯ ಗ್ರಾ.ಅ & ಪಂ.ರಾ ಇಲಾಖೆಯ ಸಚಿವರು ಸೂಚಿಸಿರುತ್ತಾರೆ.

ಮುಂದುವರೆದು, ಕೆಆರ್‌ಐಡಿಎಲ್ ಸಂಸ್ಥೆಯು ಗ್ರಾಮ ಪಂಚಾಯಿತಿ ಗ್ರಂಥಾಲಯ (ಅರಿವು ಕೇಂದ್ರ)ಗಳ ನಿರ್ಮಾಣದ ಮಾದರಿ ವಿನ್ಯಾಸದೊಂದಿಗೆ ಒಟ್ಟು ರೂ. 37.35 ಲಕ್ಷಗಳ ಮೊತ್ತದ ಅಂದಾಜು ಪಟ್ಟಿಯನ್ನು ಸಿದ್ಧಪಡಿಸಿ, ಓದಲಾದ-1 ರಲ್ಲಿ ಸದರಿ ಕಟ್ಟಡ ನಿರ್ಮಾಣದ ಕಾಮಗಾರಿಯನ್ನು ಕೆಆರ್‌ಐಡಿಎಲ್ ಸಂಸ್ಥೆಯ ಸ್ವಂತ ಸಂಪನ್ಮೂಲದಿಂದಲೇ ಭರಿಸಲಾಗುವುದಾಗಿ ತಿಳಿಸಿರುತ್ತಾರೆ.

ಅದರಂತೆ, ಬೆಂಗಳೂರು ನಗರ ಜಿಲ್ಲೆಯ ದೊಡ್ಡಜಾಲ ಗ್ರಾಮ ಪಂಚಾಯಿತಿಯ ಅರಿವು ಕೇಂದ್ರ ಸೇರಿ ಗ್ರಾಮ ಪಂಚಾಯತಿ ಗ್ರಂಥಾಲಯ ನಿರ್ಮಾಣದ ಕಾಮಗಾರಿಯನ್ನು ಕೆಆರ್‌ಐಡಿಎಲ್ ಸಂಸ್ಥೆಯಿಂದ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: KPRC-DEV/450/2023-KPRC-DD6-KPRC (ಇ- 1182584), ಬೆಂಗಳೂರು, ದಿನಾಂಕ: 05.02.2024**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಬೆಂಗಳೂರು ನಗರ ಜಿಲ್ಲೆಯ ಯಲಹಂಕ ತಾಲ್ಲೂಕು ಪಂಚಾಯಿತಿ ವ್ಯಾಪ್ತಿಯ ದೊಡ್ಡಜಾಲ ಗ್ರಾಮ ಪಂಚಾಯತಿಯ ಅರಿವು ಕೇಂದ್ರ ಸೇರಿ ಗ್ರಾಮ ಪಂಚಾಯತಿ

ಗ್ರಂಥಾಲಯ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಒಟ್ಟು ಅಂದಾಜು ಮೊತ್ತರೂ. **37.35 ಲಕ್ಷಗಳಲ್ಲಿ (ರೂಪಾಯಿ ಮೂವತ್ತೇಳು ಲಕ್ಷದ ಮೂವತ್ತೈದು ಸಾವಿರಗಳು ಮಾತ್ರ)** ಕೆಆರ್‌ಐಡಿಎಲ್ ಸಂಸ್ಥೆಯ ಸ್ವಂತ ಸಂಪನ್ಮೂಲದಿಂದಲೇ ಭರಿಸುವ ಷರತ್ತಿಗೊಳಪಟ್ಟು, ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Signed by
Ravikumar N
Date: 05-02-2024 12:42:42

**(ಎನ್.ರವಿಕುಮಾರ್)**
ಉಪ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ ಹಾಗೂ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ರವರಿಗೆ:**
ವ್ಯವಸ್ಥಾಪಕ ನಿರ್ದೇಶಕರು,
ಕೆಆರ್‌ಐಡಿಎಲ್, ಬೆಂಗಳೂರು

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಅಡಿಟ್-1) ಮತ್ತು (ಅಡಿಟ್-2), ಕರ್ನಾಟಕ, ಬೆಂಗಳೂರು.
3. ಸನ್ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ಮುಖ್ಯ ಮಂತ್ರಿಗಳ ಕಾರ್ಯಾಲಯ, ವಿಧಾನಸೌಧ, ಬೆಂಗಳೂರು.
4. ಸನ್ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು
5. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಪಂಚಾಯತ್ ರಾಜ್, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು.
10. ಆಯುಕ್ತರು, ಪಂಚಾಯತ್ ರಾಜ್, ಕೆ.ಜಿ ರಸ್ತೆ, ಬೆಂಗಳೂರು
11. ನಿರ್ದೇಶಕರು, ಪಂಚಾಯತ್ ರಾಜ್, ಕೆ.ಜಿ . ರಸ್ತೆ, ಬೆಂಗಳೂರು
12. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ
13. ವಿಶೇಷಾಧಿಕಾರಿಗಳೂ (ಜಿ.ಪಂ.) ಮತ್ತು ಪದನಿಮಿತ್ತ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು.
14. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ. ಅ ಮತ್ತು ಪಂ. ರಾಜ್ ಇಲಾಖೆ, ಬೆಂಗಳೂರು.
15. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿಲ್ಲಾ ಪಂಚಾಯತ್, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
16. ಮುಖ್ಯಸ್ಥರು, ಗಣಕಕೋಟಶ, ಗ್ರಾ. ಪಂ.ರಾಜ್ ಇಲಾಖೆ, ವೆಬ್ ಸೈಟ್‌ನಲ್ಲಿ ಅಳವಡಿಸಲು
17. ಸಂಪದಾಕರು,ಕರ್ನಾಟಕ ವಿಕಾಸ, ಷತ್ರಿಕೆಯಲ್ಲಿ ಪ್ರಕಟಿಸಲು.
18. ರಕ್ಷಾ ಕಡತ/ ಹೆಚ್ಚುವರಿ ಪ್ರತಿ